



ಅರುಣ ಪಿ. ಭಟ್ಟ

## ವಾರಭವಿಷ್ಯ: 28.08.2025ರಿಂದ 03.09.2025ರವರೆಗೆ





ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು ದೊರೆಯುವ ಸಾಧ್ಯತೆ ಹೆಚ್ಚಿದೆ. ದೇವತಾ ಆರಾಧನೆಗೆ ಹೆಚ್ಚಿನ ಒತ್ತು ಕೊಡುವಿರಿ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಆರೋಗ್ಯದಲ್ಲಿ ಚೇತರಿಕೆ, ಹಣಕಾಸಿನ ಸಮಸ್ಯೆಗಳು ಕಾಡಬಹುದು. ಶುಭದಿನ: 30. ಕನಕಧಾರಾ ಸ್ತೋತ್ರ ಪಠಣ ಮಾಡಿರಿ.

---




ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದಪತ್ರಗಳನ್ನು ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಲ್ಲಿ ಯಶಸ್ಸು. ವೈಯಕ್ತಿಕ ಸಂಬಂಧದಲ್ಲಿ ಕಹಿ ಬೆಳವಣಿಗೆಗಳು ಆಗಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬದವರ ಬೆಂಬಲ ದೊರೆಯಲಿದೆ. ಉನ್ನತ ಶಿಕ್ಷಣ ಶಿಕ್ಷಣ ಪಡೆಯಬೇಕು ಎಂದುಕೊಂಡವರಿಗೆ ಅತ್ಯುತ್ತಮ ಪ್ರಗತಿ ಇದೆ. ಶುಭದಿನ: 02. ಸೌಂದರ್ಯಲಹರಿ ಪಠಿಸಿರಿ.

---




ವ್ಯಾಪಾರದಲ್ಲಿ ಪ್ರಗತಿ ಕಾಣಿಸುತ್ತದೆ. ಇದರಿಂದ ಆತ್ಮವಿಶ್ವಾಸ ಹೆಚ್ಚಾಗುತ್ತದೆ. ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಉದ್ಯಮ ವಿಸ್ತರಣೆ ಬಗ್ಗೆ ಮುಖ್ಯವಾದ ತೀರ್ಮಾನವನ್ನು ಕೈಗೊಳ್ಳಲಿದ್ದೀರಿ. ವೈವಾಹಿಕ ಜೀವನದಲ್ಲಿ ಸಂತೋಷ. ಕೆಲಸ ಕಾರ್ಯ ಮುಂದೂಡಬೇಕಾದ ಸನ್ನಿವೇಶ ಎದುರಾಗುತ್ತದೆ. ಶುಭದಿನ: 01. ಕಾಲಭೈರವನ ಸೇವೆ ಮಾಡಿರಿ.

---





ಕುಟುಂಬ ಸದಸ್ಯರ ಜೊತೆ ಕೆಲ ಅಸಮಾಧಾನದ ಘಟನೆಗಳು ಸಂಭವಿಸುವ ಸಾಧ್ಯತೆ. ಆಪ್ತರನ್ನು ಭೇಟಿ ಆಗಲಿದ್ದೀರಿ. ಕೌಟುಂಬಿಕವಾಗಿ ಕೆಲ ಜವಾಬ್ದಾರಿಗಳನ್ನು ನೀವು ವಹಿಸಿಕೊಳ್ಳಬೇಕಾಗುತ್ತದೆ. ವಾರದ ಮಧ್ಯಭಾಗ ಕಳೆದ ನಂತರ ಕೋರ್ಟ್ ವ್ಯಾಜ್ಯಗಳು ಇದ್ದಲ್ಲಿ ನಿಮ್ಮ ಪರವಾದ ಬೆಳವಣಿಗೆ ಅಥವಾ ತೀರ್ಪು ಬರುವ ಸಾಧ್ಯತೆಗಳು ಹೆಚ್ಚಿವೆ. ಶುಭದಿನ: 31. ಲಿಂಗಾಷ್ಟಕ ಪಠಿಸಿರಿ.

---





ಆದಾಯ ಮೂಲ ಹೆಚ್ಚಿಸಿಕೊಳ್ಳುವ ಕಡೆಗೆ ಗಮನ ಕೇಂದ್ರೀಕೃತವಾಗಿರುತ್ತದೆ. ಆದಾಯದಲ್ಲಿ ಏರಿಕೆ ಕಾಣಿಸಿಕೊಳ್ಳುತ್ತದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಪ್ರಗತಿ ಇದೆ. ಹೆಚ್ಚು ಶ್ರಮ ತೆಗೆದುಕೊಂಡು ಕೆಲಸ ಕಾರ್ಯಗಳನ್ನು ಮಾಡಬೇಕಾಗುತ್ತದೆ. ದಿಢೀರನೆ ಸಂಗಾತಿ ಜತೆಗೆ ಕಲಹ ಕಾಣಿಸಿಕೊಳ್ಳಬಹುದು. ಇದರಿಂದ ಚಿಂತೆಗೆ ಒಳಗಾಗುತ್ತೀರಿ. ಶುಭದಿನ: 30. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.

---




ಉದ್ಯೋಗಸ್ಥರಿಗೆ ವಾರದ ಶುರುವಿನಲ್ಲಿ ಯಶಸ್ಸು ದೊರೆಯಲಿದೆ. ಒಂದೊಂದಾಗಿ ಯಶಸ್ಸು ದೊರೆಯಲು ಆರಂಭವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ವರ್ಚಸ್ಸು ಹೆಚ್ಚಾಗುತ್ತದೆ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಆರೋಗ್ಯದಲ್ಲಿ ಸ್ವಲ್ಪ ಮಟ್ಟಿಗೆ ಸಮಸ್ಯೆಗಳು ಎದುರಾಗಬಹುದು. ವೈವಾಹಿಕ ಜೀವನದಲ್ಲಿ ಭಿನ್ನಮತ ಕಲಹಗಳು ಕಾಣಿಸಬಹುದು. ಶುಭದಿನ: 29. ಗಣಪತಿಗೆ ದೂರ್ವಾರ್ಚನೆ ಮಾಡಿರಿ.

---





ಸಂಶೋಧಕರಿಗೆ ಬಹುಮಾನ ದೊರೆಯಬಹುದು. ಉನ್ನತ ಶಿಕ್ಷಣದಲ್ಲಿ ಪ್ರಗತಿ. ಕುಟುಂಬದಲ್ಲಿ ಬಾಂಧವ್ಯ ಗಟ್ಟಿಯಾಗಲಿದೆ. ಉದ್ಯಮಿಗಳಿಗೆ ಅತ್ಯುತ್ತಮವಾದ ಸಮಯ. ಬಹಳ ಕಾಲದಿಂದ ಹಾಕಿಕೊಂಡಿದ್ದ ಯೋಜನೆಗಳನ್ನು ಜಾರಿಗೆ ತರಲಿದ್ದೀರಿ. ಮೇಲಧಿಕಾರಿಗಳ ಜತೆಗೆ ಉತ್ತಮ ಸಂಪರ್ಕ ಸಾಧಿಸುತ್ತೀರಿ. ನಿಮ್ಮ ಪ್ರತಿಭೆ ಹಾಗೂ ಶ್ರಮಕ್ಕೆ ಅವರು ಮೆಚ್ಚುಗೆ ಸೂಚಿಸುತ್ತಾರೆ. ಶುಭದಿನ: 31. ವಿಷ್ಣು ಸಹಸ್ರನಾಮ ಪಠಿಸಿರಿ.

---





ಕೌಟುಂಬಿಕ ವಿಚಾರದಲ್ಲಿ ಹಿನ್ನಡೆ ಕಾಣುವಂತಾಗುತ್ತದೆ. ಇದರಿಂದ ಚಿಂತೆಗೆ ಗುರಿಯಾಗುತ್ತೀರಿ. ಉತ್ತಮವಾಗಿ ಕೆಲಸ ಮಾಡಲು ಯತ್ನಿಸುತ್ತೀರಿ. ಹಲವು ಸವಾಲುಗಳು ಏಕಕಾಲಕ್ಕೆ ಎದುರಾಗುತ್ತವೆ. ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಅವಕಾಶಗಳ ಕಡೆಗೆ ಗಮನ ಕೇಂದ್ರೀಕರಿಸಲಿದ್ದೀರಿ. ಸಂಗಾತಿ ಮಕ್ಕಳ ಜೊತೆಗೆ ಬಾಂಧವ್ಯ ಗಟ್ಟಿಯಾಗುತ್ತದೆ. ಶುಭದಿನ: 02. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ ಪಠಿಸಿರಿ.

---





ವಾರದ ಆರಂಭದಲ್ಲಿ ಗೃಹಾಲಂಕಾರದ ಕಡೆಗೆ ಗಮನ ಹೆಚ್ಚಿರುತ್ತದೆ. ಒಟ್ಟಾರೆ ನಿಮ್ಮ ಮನೆಯ ಸ್ವರೂಪವನ್ನು ಬದಲಾಯಿಸುವುದರಲ್ಲಿ ತೊಡಗಿಸಿಕೊಳ್ಳುತ್ತೀರಿ. ದಿಢೀರನೆ ಜಗಳ ಸಂಭವಿಸಬಹುದು. ವಾರದ ಅಂತ್ಯಕ್ಕೆ ಸರಿಯುತ್ತಾ ಶೈಕ್ಷಣಿಕ ಸಂಗತಿಗಳಿಗೆ ಹೆಚ್ಚಿನ ಮಹತ್ವ ನೀಡುತ್ತೀರಿ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯ ನಡವಳಿಕೆ ಸಂತಸ ಉಂಟು ಮಾಡಲಿದೆ. ಶುಭದಿನ: 03. ಆಂಜನೇಯ ಸ್ತೋತ್ರ ಪಠಿಸಿರಿ.

---





ಕುಟುಂಬ ವಿಚಾರಗಳಿಗೆ ಹೆಚ್ಚು ಪ್ರಾಶಸ್ತ್ಯ ನೀಡಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ನಿಮ್ಮ ಪ್ರತಿಭೆಗೆ ಗೌರವ ದೊರೆಯಲಿದೆ. ನಿಮ್ಮ ಕ್ರಿಯಾತ್ಮಕ ಆಲೋಚನೆಯನ್ನು ಗರಿಷ್ಠ ಮಟ್ಟಕ್ಕೆ ಬಳಸುವ ಅವಕಾಶ ದೊರೆಯಲಿದೆ. ವೈಯಕ್ತಿಕ ಸಂಬಂಧದಲ್ಲಿ ಬಾಂಧವ್ಯ ಗಟ್ಟಿ ಆಗುವುದರಿಂದ ಹೆಚ್ಚು ಸಂತುಷ್ಟರಾಗಲಿದ್ದೀರಿ. ಉದ್ಯೋಗದಲ್ಲಿ ಮುಖ್ಯ ಬೆಳವಣಿಗೆ ಎದುರು ನೋಡಬಹುದು. ಶುಭದಿನ: 01. ಶ್ರೀ ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.

---




ಆದಾಯ ಹೆಚ್ಚಳ ಪ್ರಯತ್ನಕ್ಕೆ ಫಲ ದೊರೆಯುವುದಿಲ್ಲ. ಹಿಂದೆ ನೀವು ಹಾಕಿದ ಶ್ರಮಕ್ಕೆ ಫಲಿತಾಂಶ ದೊರೆಯಲಿದೆ. ತಾಜಾತನ ಉಳಿಸಿಕೊಳ್ಳಲಿದ್ದೀರಿ. ಓದಿನಲ್ಲಿ ನಿಮ್ಮ ಏಕಾಗ್ರತೆ ಹೆಚ್ಚಳವಾಗಲಿದೆ. ವೈಯಕ್ತಿಕ ಬಾಂಧವ್ಯ ಗಟ್ಟಿಯಾಗಲಿದೆ. ವ್ಯವಹಾರದ ವಿವಾದಗಳು ತಲೆ ಎತ್ತುವ ಸಾಧ್ಯತೆಗಳಿವೆ. ಅನಿರೀಕ್ಷಿತ ಖರ್ಚುಗಳಿಗಾಗಿ ಹಣ ಮೀಸಲಿಡಲಿದ್ದೀರಿ. ಶುಭದಿನ: 02. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.

---




ಆರೋಗ್ಯದ ಬಗ್ಗೆ ನಿಮ್ಮ ಗಮನ ಹೆಚ್ಚಾಗಲಿದೆ. ನೀವು ಹಾಕಿದ ಶ್ರಮಕ್ಕೆ ಅತ್ಯುತ್ತಮ ಫಲಿತಾಂಶ ದೊರೆಯುತ್ತದೆ. ಉದ್ಯಮಿಗಳು ಸ್ಥಳೀಯ ಮಾರುಕಟ್ಟೆ ಸಮೀಕ್ಷೆ ಮಾಡಲಿದ್ದೀರಿ. ಉತ್ಪನ್ನಗಳಿಗೆ ಮಾರುಕಟ್ಟೆ ವಿಸ್ತರಿಸಲು ಹೆಚ್ಚು ಶ್ರಮಿಸಲಿದ್ದೀರಿ. ಆರೋಗ್ಯ ಉತ್ತಮವಾಗಿರುತ್ತದೆ. ಹಣಕಾಸಿನ ಹರಿವು ಹೆಚ್ಚಳವಾಗಲಿದೆ. ಹಣ ಗಳಿಕೆಗೆ ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ಶುಭದಿನ: 03. ಹನುಮಾನ್ ಚಾಲೀಸ್ ಓದಿರಿ.